ಮೇಲ್ದರ್ಜೆಗೇರಿಸಲ್ಪಟ್ಟ ರಾಜ್ಯ ಹೆದ್ದಾರಿಯಾದ ಕಲ್ಲಾಲಾ ಶಿಗ್ಗಾಂವಿ ರಸ್ತೆ (ಶಿಗ್ಗಾಂವಿ ಗುಡಗೇರಿ ರಸ್ತೆ)ಯ ತಗ್ಗು ಗುಂಡಿಗಳನ್ನು ತುಂಬಿ ನಿರ್ವಹಣೆ ಮಾಡಲು 04–05ನೇ ಸಾಲಿನಲ್ಲಿ 3054 ರಸ್ತೆ ಮತ್ತು ಸೇತುವೆಗಳು ಯೋಜನೆ (ಮುಖ್ಯಮಂತ್ರಿಗಳ ಗ್ರಾಮೀಣ ರಸ್ತೆ ಅಭಿವೃದ್ಧಿ) ರೂ.4.65 ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು ದುರಸ್ತಿ ಕಾಮಗಾರಿಯನ್ನು ಗುತ್ತಿಗೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಕೈಗೆತ್ತಿಕೊಳ್ಳಲಾಗುವುದು. ಶಿಗ್ಗಾಂವಿ ಸವಣೂರು ತಾಲ್ಲೂಕಿನ ಎಲ್ಲಾ ಜಿಲ್ಲಾ ಮುಖ್ಯ ರಸ್ತೆಗಳ ಗುಂಡಿ ತುಂಬುವ ಕಾಮಗಾರಿಯನ್ನು ಜನವರಿ 05 ರ ಮೊದಲ ವಾರದಲ್ಲಿಯೇ ಪೂರ್ಣಗೊಳಿಸಲಾಗಿದೆ. ಕಾರವಾರ ಕೈಗಾ ಇಳಕಲ್ ರಾಜ್ಯ ಹೆದ್ದಾರಿ ಹಾಗೂ ಸವಣೂರು ಶೆರೆವಾಡ ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಆಗಿರುವ ಅಕ್ರಮ ಕಟ್ಟಡಗಳನ್ನು ತೆರವುಗೊಳಿಸುವಂತೆ ಈಗಾಗಲೇ ನೋಟೀಸ್ ನೀಡಲಾಗಿದ್ದು, ಶೀಘ್ರವೇ ಅಕ್ರಮ ಕಟ್ಟಡಗಳನ್ನು ತೆರವುಗೊಳಿಸಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಇ) ಕೈಗೊಳ್ಳಲಾಗುತ್ತಿದೆ.

855(247) ಶ್ರೀ ಸೋಮಣ್ಣ ವಿ. (ಬಿನ್ನಿಪೇಟೆ): ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದ ಕ್ರೀಡಾ ಪ್ರಾಧಿಕಾರದಲ್ಲಿ ಒಟ್ಟು ಇರತಕ್ಕ ಸಿಬ್ಬಂದಿ ಹಾಗೂ ಕೆಲಸ ನಿರ್ವಹಿಸುತ್ತಿರುವ ವಿವಿಧ ಕ್ರೀಡೆಗಳ ತರಬೇತುದಾರರ ಸಂಖ್ಯೆ ಎಷ್ಟು?

ಆ) ಈ ಪ್ರಾಧಿಕಾರದಲ್ಲಿನ ಸಿಬ್ಬಂದಿಗೆ ಹಾಗೂ ತರಬೇತಿದಾರರಿಗೆ ಹೆಚ್ಚಿನ ವೇತನ ನೀಡಲು ಕ್ರಮ ಕೈಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) 2004–05ರಲ್ಲಿ ಈ ಪ್ರಾಧಿಕಾರಕ್ಕೆ ಸರ್ಕಾರ ನೀಡಿರುವ ಅನುದಾನವೆಷ್ಟು ಹಾಗೂ ಈ ಸಾಲಿನಲ್ಲಿ ಕ್ರೀಡಾ ತರಬೇತಿಯ ಸಾಮಗ್ರಿಗಳ ಖರೀದಿಗೆ ಮೀಸಲಿಟ್ಟಿರುವ ಹಣವೆಷ್ಟು;

ಈ) 2004–05ರಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕ್ರೀಡಾ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ಕೈಗೊಂಡಿರುವ ಹಾಗೂ ಕೈಗೊಳ್ಳಲಿರುವ ಕಾರ್ಯಕ್ರಮಗಳೇನು (ವಿವರ ನೀಡುವುದು)?

ಶ್ರೀ ಜಬ್ಬಾರ್ ಖಾನ್ ಹೊನ್ನಳ್ಳಿ (ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು) :

ಅ) ಕರ್ನಾಟಕ ಕ್ರೀಡಾ ಪ್ರಾಧಿಕಾರದಲ್ಲಿ 109 ತರಬೇತಿದಾರರು ಹಾಗೂ 44 ಜನ ಸಿಬ್ಬಂದಿ ಒಟ್ಟು 153 ಜನ ಕಾರ್ಯನಿರ್ವಹಿಸುತ್ತಿದ್ದಾರೆ.

ಆರ್ಚರಿ	–	01	ಜಿಮ್ನಾಸ್ಟಿಕ್ಸ್	–	06
ಅಥ್ಲೆಟಿಕ್ಸ್	–	15	ಹಾಕಿ	–	14
ಬ್ಯಾಡ್ಮಿಂಟನ್	–	01	ಜುಡೋ	–	03
ಬಾಕ್ಸಿಂಗ್	–	03	ಖೋ–ಖೋ	–	06
			ಕಬಡ್ಡಿ	–	05
ಬ್ಯಾಸ್ಕೆಟ್‌ಬಾಲ್	–	10	ಟೆನ್ನಿಸ್	–	01
ಕ್ರಿಕೆಟ್	–	04	ಈಜು	–	04

ಸೈಕ್ಲಿಂಗ್	–	06	ವಾಲಿಬಾಲ್	–	17
ಪುಟ್ಬಾಲ್	–	05	ಕುಸ್ತಿ	–	03
ಪೆನ್ಸಿಂಗ್	–	01	ಬೇಸ್ ಬಾಲ್	–	01
ವೈಟ್‌ಲಿಫ್ಟಿಂಗ್	–	03			

ಆ) ತರಬೇತಿದಾರರಿಗೆ ನೀಡಿದ ವೇತನ ಹೆಚ್ಚಳದ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಇ) 2004–05 ನೇ ಸಾಲಿನಲ್ಲಿ ಕರ್ನಾಟಕ ಕ್ರೀಡಾ ಪ್ರಾಧಿಕಾರಕ್ಕೆ ಯೋಜನೆ ಶೀರ್ಷಿಕೆ ಅಡಿಯಲ್ಲಿ ಕೇವಲ ರೂ.1.00 ಲಕ್ಷ ಮಾತ್ರ ಹಾಗೂ ಯೋಜನೇತರ ಶೀರ್ಷಿಕೆ ಅಡಿಯಲ್ಲಿ ರೂ.95.00 ಲಕ್ಷಗಳನ್ನು ಆಯವ್ಯಯದಲ್ಲಿ ಒದಗಿಸಲಾಗಿರುತ್ತದೆ. ಯೋಜನಾ ಆಯವ್ಯಯದಲ್ಲಿ ಒದಗಿಸಲಾಗಿರುವ ಅನುದಾನದಿಂದ ಕ್ರೀಡಾ ತರಬೇತಿ ನೀಡಲು ಕ್ರೀಡಾ ಸಾಮಗ್ರಿಗಳ ಖರೀದಿಗೆ ಯಾವುದೇ ಅನುದಾನ ಮೀಸಲಾಗಿಡಲು ಸಾಧ್ಯವಾಗಿಲ್ಲ.

ಈ) 2004–05 ರಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕ್ರೀಡಾ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ದಸರಾ ಕ್ರೀಡಾ ಕೂಟವನ್ನು ತಾಲ್ಲೂಕಿನಿಂದ ರಾಜ್ಯಮಟ್ಟದವರೆಗೆ ನಡೆಸಲಾಗಿದೆ. ಗ್ರಾಮೀಣ ಕ್ರೀಡಾಕೂಟವನ್ನು ತಾಲ್ಲೂಕಿನಿಂದ ರಾಜ್ಯಮಟ್ಟದವರೆಗೆ ನಡೆಸಿ ರಾಷ್ಟ್ರಮಟ್ಟಕ್ಕೆ ತಂಡವನ್ನು ಕಳುಹಿಸಲಾಗಿದೆ. ಮಹಿಳಾ ಕ್ರೀಡಾ ಸ್ಪರ್ಧೆಗೆ ರಾಷ್ಟ್ರಮಟ್ಟಕ್ಕೆ ತಂಡವನ್ನು ಕಳುಹಿಸಲಾಗುತ್ತಿದ್ದು, ಪ್ರಸ್ತುತ ಕ್ರೀಡಾ ಶಾಲೆ ಮತ್ತು ನಿಲಯಗಳಿಗೆ ಆಯ್ಕೆಯನ್ನು ನಡೆಸಲಾಗುತ್ತಿದೆ. ಅಲ್ಲದೆ ಗ್ರಾಮೀಣ ಪ್ರದೇಶದಲ್ಲಿ ಕ್ರೀಡಾ ತರಬೇತಿ ಶಿಬಿರಗಳನ್ನು ನಡೆಸಲಾಗುತ್ತಿದೆ.

858(1250) ಶ್ರೀ ಶ್ರೀನಿವಾಸ್ ಎಂ. (ಮಂಡ್ಯ): ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಂಡ್ಯ ಕ್ರೀಡಾಂಗಣವನ್ನು ಮಂಡ್ಯ ನಗರ ಪೂರ್ಣ ಪ್ರಮಾಣದಲ್ಲಿ ನವೀಕರಿಸಿ ಎಲ್ಲಾ ಸವಲತ್ತುಗಳನ್ನೊಳಗೊಂಡ ಕ್ರೀಡಾಂಗಣವನ್ನಾಗಿ ಮಾರ್ಪಡಿಸುವ ಸಲುವಾಗಿ ಹಳೆಯ ಕ್ರೀಡಾಂಗಣವನ್ನು ನವೀಕರಿಸಲು ಅಂದಾಜು ವೆಚ್ಚದ ಪಟ್ಟಿಯನ್ನು ಲೋಕೋಪಯೋಗಿ ಇಲಾಖೆಗೆ ಕಳುಹಿಸಿಕೊಟ್ಟಿರುವುದು ನಿಜವೇ:

ಆ) ಹಾಗಿದ್ದಲ್ಲಿ, ಇದು ಯಾವ ಹಂತದಲ್ಲಿದೆ:

ಇ) ಈ ಕಾಮಗಾರಿಯ ಕೆಲಸ ಎಂದಿನಿಂದ ಪ್ರಾರಂಭವಾಗುತ್ತದೆ (ಪೂರ್ಣ ವಿವರ ಒದಗಿಸುವುದು)?

ಶ್ರೀ ಜಬ್ಬಾರ್ ಖಾನ್ ಹೊನ್ನಳ್ಳಿ (ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು) :

ಅ) ಮಂಡ್ಯ ನಗರದಲ್ಲಿ ಜಿಲ್ಲಾ ಕ್ರೀಡಾಂಗಣವಿದ್ದು ಇದನ್ನು ನವೀಕರಿಸಿ ಎಲ್ಲಾ ಸವಲತ್ತುಗಳನ್ನೊಳಗೊಂಡ ಕ್ರೀಡಾಂಗಣವನ್ನಾಗಿ ಮಾರ್ಪಡಿಸುವ ಪ್ರಸ್ತಾವನೆ ಇರುವುದಿಲ್ಲ. ಆದರೇ, ಈ ಕೆಳಕಂಡ ಕಾಮಗಾರಿಗಳ ಪ್ರಸ್ತಾವನೆ ಇರುತ್ತದೆ.

1. ಪ್ರೇಕ್ಷಕರ ಗ್ಯಾಲರಿಯ ಬಂಡ್ ದುರಸ್ತಿ ಹಾಗೂ ಮೇಲ್ಛಾವಣಿ ನಿರ್ಮಾಣ.
2. ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿರುವ ವ್ಯಾಯಾಮಶಾಲೆಯ ಕಟ್ಟಡದ ಕಿಟಕಿ, ಬಾಗಿಲುಗಳ ದುರಸ್ತಿ.